APC-B.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಆಹಾರ ಕರ್ನಾಟಕ ನಿಯಮಿತದ ಆಡಳಿತ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಕೃತೋಇ 83 ಕೃರಾಗೊ 2011, ದಿ:05.11.2011.
2. ಆಹಾರ ಕರ್ನಾಟಕ ನಿಯಮಿತ ಇವರ ಪತ್ರ ಸಂಖ್ಯೆ:ಆಕನಿ/ಆಕನಿ ಬಲವರ್ಧನೆ-ಆಮಬ/2018-19, ದಿ:07.08.2018.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ:1 ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಆಹಾರ ಕರ್ನಾಟಕ ನಿಯಮಿತದ ಆಡಳಿತ ಮಂಡಳಿಯನ್ನು ಕೆಳಕಂಡಂತೆ ರಚಿಸಿ ಆದೇಶಿಸಲಾಗಿರುತ್ತದೆ.

| | | | |
|---|---|---|---|
| 1) | ಮಾನ್ಯ ಕೃಷಿ ಸಚಿವರು | : | ಅಧ್ಯಕ್ಷರು |
| 2) | ಮಾನ್ಯ ತೋಟಗಾರಿಕೆ ಸಚಿವರು | : | ಉಪಾಧ್ಯಕ್ಷರು |
| 3) | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆಹಾರ ಸಂಸ್ಕರಣೆ ಮತ್ತು ಕಟಾವು ತಂತ್ರಜ್ಞಾನ | : | ಸದಸ್ಯರು |
| 4) | ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ | : | ಸದಸ್ಯರು |
| 5) | ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ | : | ಸದಸ್ಯರು |
| 6) | ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, | : | ಸದಸ್ಯರು |
| 7) | ಆಯುಕ್ತರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಅಥವಾ ಅವರ ಪ್ರತಿನಿಧಿ (ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉದ್ಯೋಗ ಮಿತ್ರ ಅಥವಾ ಅವರ ವೃಂದದ ಅಧಿಕಾರಿ) | : | ಸದಸ್ಯರು |
| 8) | ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಮತ್ತು ಕಾರ್ಯನಿರ್ವಾಹಕ ಸದಸ್ಯರು, ಕೆ.ಎ.ಐ.ಡಿ.ಬಿ | : | ಸದಸ್ಯರು |
| 9) | ನಿರ್ದೇಶಕರು, ತೋಟಗಾರಿಕೆ ಇಲಾಖೆ | : | ಸದಸ್ಯರು |
| 10) | ನಿರ್ದೇಶಕರು, ಕೃಷಿ ಇಲಾಖೆ | : | ಸದಸ್ಯರು |
| 11) | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ನಿಗಮ ನಿಯಮಿತ (KAPPEC) | : | ಸದಸ್ಯರು ಮತ್ತು ಪದನಿಮಿತ್ತ ವ್ಯವಸ್ಥಾಪಕ ನಿರ್ದೇಶಕರು, ಆಹಾರ ಕರ್ನಾಟಕ ನಿಯಮಿತ |

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಆಹಾರ ಕರ್ನಾಟಕ ನಿಯಮಿತ ಇವರ ಪತ್ರದಲ್ಲಿ ರಾಜ್ಯದಲ್ಲಿ ಕೃಷಿ ಹಾಗೂ ಆಹಾರ ಸಂಸ್ಕರಣೆ ಕ್ಷೇತ್ರದ ಉತ್ತೇಜನ ಹಾಗೂ ಆಹಾರ ಕರ್ನಾಟಕ ನಿಯಮಿತವನ್ನು ಬಲವರ್ಧಿಸುವ ಸಲುವಾಗಿ ಹಾಗೂ ಪ್ರಸ್ತುತ ಸಂದರ್ಭಕ್ಕೆ ತಕ್ಕಂತೆ ಆಹಾರ ಕರ್ನಾಟಕ ನಿಯಮಿತದ ಆಡಳಿತ ಮಂಡಳಿಯಲ್ಲಿ ನಿರ್ದೇಶಕರು, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರನ್ನು ಸಹ ಸೇರಿಸುವಂತೆ ಹಾಗು ವ್ಯವಸ್ಥಾಪಕ ನಿರ್ದೇಶಕರು, ಆಹಾರ ಕರ್ನಾಟಕ ನಿಯಮಿತ ಇವರನ್ನು ಸದಸ್ಯ-ಕಾರ್ಯದರ್ಶಿಯನ್ನಾಗಿ ನೇಮಿಸಿ ಆಡಳಿತ ಮಂಡಳಿಯನ್ನು ಪುನರ್‌ರಚಿಸಿ ಆದೇಶಿಸುವಂತೆ ಕೋರಲಾಗಿರುತ್ತದೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಕಂಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 61 ಕೃರಾಗೊ 2018 (ಭಾ-1), ಬೆಂಗಳೂರು, ದಿನಾಂಕ:29-03-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಕೃಷಿ ಹಾಗೂ ಆಹಾರ ಸಂಸ್ಕರಣೆ ಕ್ಷೇತ್ರದ ಉತ್ತೇಜನ ಹಾಗೂ ಆಹಾರ ಕರ್ನಾಟಕ ನಿಯಮಿತವನ್ನು ಬಲವರ್ಧಿಸುವ ಸಲುವಾಗಿ ಹಾಗೂ ಪ್ರಸ್ತುತ ಸಂದರ್ಭಕ್ಕೆ ತಕ್ಕಂತೆ ಆಹಾರ ಕರ್ನಾಟಕ ನಿಯಮಿತದ ಆಡಳಿತ ಮಂಡಳಿಯನ್ನು ಕೆಳಕಂಡಂತೆ ಪುನರ್‌ರಚಿಸಿ ಆದೇಶಿಸಿದೆ.

| | | | |
|---|---|---|---|
| 1) | ಮಾನ್ಯ ಕೃಷಿ ಸಚಿವರು | : | ಅಧ್ಯಕ್ಷರು |
| 2) | ಮಾನ್ಯ ತೋಟಗಾರಿಕೆ ಸಚಿವರು | : | ಉಪಾಧ್ಯಕ್ಷರು |
| 3) | ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಆಹಾರ ಸಂಸ್ಕರಣೆ ಮತ್ತು ಕಟಾವು ತಂತ್ರಜ್ಞಾನ | : | ಸದಸ್ಯರು |
| 4) | ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಕೃಷಿ ಇಲಾಖೆ | : | ಸದಸ್ಯರು |
| 5) | ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ | : | ಸದಸ್ಯರು |
| 6) | ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಆರ್ಥಿಕ ಇಲಾಖೆ, | : | ಸದಸ್ಯರು |
| 7) | ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಸಾರ್ವಜನಿಕ ಉದ್ದಿಮೆಗಳ ಇಲಾಖೆ | : | ಸದಸ್ಯರು |
| 8) | ಆಯುಕ್ತರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಅಥವಾ ಅವರ ಪ್ರತಿನಿಧಿ (ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉದ್ಯೋಗ ಮಿತ್ರ ಅಥವಾ ಅವರ ವೃಂದದ ಅಧಿಕಾರಿ) | : | ಸದಸ್ಯರು |
| 9) | ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಮತ್ತು ಕಾರ್ಯನಿರ್ವಾಹಕ ಸದಸ್ಯರು, ಕೆ.ಎ.ಐ.ಡಿ.ಬಿ | : | ಸದಸ್ಯರು |
| 10) | ನಿರ್ದೇಶಕರು, ತೋಟಗಾರಿಕೆ ಇಲಾಖೆ | : | ಸದಸ್ಯರು |
| 11) | ನಿರ್ದೇಶಕರು, ಕೃಷಿ ಇಲಾಖೆ | : | ಸದಸ್ಯರು |
| 12) | ನಿರ್ದೇಶಕರು, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ | : | ಸದಸ್ಯರು |
| 13) | ನಿರ್ದೇಶಕರು, ಮೀನುಗಾರಿಕೆ ಇಲಾಖೆ | : | ಸದಸ್ಯರು |
| 14) | ವ್ಯವಸ್ಥಾಪಕ ನಿರ್ದೇಶಕರು, ಆಹಾರ ಕರ್ನಾಟಕ ನಿಯಮಿತ | : | ಸದಸ್ಯ-ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್.ನಾಗರತ್ನಮ್ಮ)

ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ).

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಸಾರ್ವಜನಿಕ ಉದ್ದಿಮೆಗಳ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಆಹಾರ ಸಂಸ್ಕರಣೆ ಮತ್ತು ಕಟಾವು ತಂತ್ರಜ್ಞಾನ), ಬಹುಮಹಡಿ ಕಟ್ಟಡ, ಬೆಂಗಳೂರು
5. ಆಯುಕ್ತರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಮತ್ತು ಕಾರ್ಯನಿರ್ವಾಹಕ ಸದಸ್ಯರು, ಕೆ.ಎ.ಐ.ಡಿ.ಬಿ, ಬೆಂಗಳೂರು.
7. ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು
9. ನಿರ್ದೇಶಕರು, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಬೆಂಗಳೂರು
10. ನಿರ್ದೇಶಕರು, ಮೀನುಗಾರಿಕೆ ಇಲಾಖೆ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಆಹಾರ ಕರ್ನಾಟಕ ನಿಯಮಿತ, ಬೆಂಗಳೂರು.
12. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
13. ಮಾನ್ಯ ತೋಟಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
14. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
15. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು

****